## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 698(988) |
| ಸದಸ್ಯರ ಹೆಸರು : | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 27.02.2022 |
| ಉತ್ತರಿಸುವವರು : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿ ಗಳಲ್ಲಿ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; | ರಾಜ್ಯದ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿ ಖಾಯಂ-5702, ನೇರಪಾವತಿ-5731 ಮತ್ತು ಹೊರಗುತ್ತಿಗೆ /ಗುತ್ತಿಗೆ/ದಿನಗೂಲಿ/ಕ್ಷೇಮಾಭಿವೃದ್ಧಿ/ಇತರೆ-880 ಸೇರಿ ಒಟ್ಟು 12313 ಪೌರಕಾರ್ಮಿಕರುಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |
| ಆ) | ಈ ನಗರಸಭೆ, ಪುರಸಭೆಯ ಎಲ್ಲಾ ವಾರ್ಡುಗಳಲ್ಲಿ ಕಸ ವಿಲೇವಾರಿ ಹಾಗೂ ಇನ್ನಿತರೆ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಪೌರ ಕಾರ್ಮಿಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ? | ಬಂದಿದೆ.<br>ಸರ್ಕಾರದ ಆದೇಶ ಸಂಖ್ಯೆ: ನಅಇ 126 ಟಿಎಂಎಸ್ 2016, ದಿನಾಂಕ: 7.8.2017 ರಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ 700 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕರಂತೆ ನಿಗದಿಪಡಿಸಲಾಗಿದ್ದು, ಹೊರಗುತ್ತಿಗೆ ನೀಡುವುದನ್ನು ಸ್ಥಗಿತಗೊಳಿಸಿ ಸ್ಥಳೀಯ ಸಂಸ್ಥೆಗಳಿಂದ ನೇರವಾಗಿ ಸಂಭಾವನೆಯನ್ನು ನೀಡಲು ಆದೇಶಿಸಲಾಗಿರುತ್ತದೆ.<br>ಪ್ರಸ್ತುತ ಪೌರಸೇವಾ ವೃಂದದ ವೃಂದ ಮತ್ತು ನೇಮಕಾತಿ ನಿಯಮದಲ್ಲಿ ನಗರಸಭೆಗಳಲ್ಲಿ ಶೇ.50 ರಷ್ಟು ನೇರ ನೇಮಕಾತಿ ಮತ್ತು ಶೇ.50 ರಷ್ಟು ನೇರ ಪಾವತಿ ಮೂಲಕ ಭರ್ತಿ ಮಾಡಲು ಹಾಗೂ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಶೇ.100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ<br>ಸರ್ಕಾರದ ಆದೇಶ ಸಂಖ್ಯೆ: 126 ಟಿಎಂಎಸ್ 2016 ದಿನಾಂಕ: 04.12.2017 ರೀತ್ಯಾ ಪೌರಕಾರ್ಮಿಕರನ್ನು ಒಂದು ಬಾರಿಗೆ ವಿಶೇಷ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುವಂತೆ ಈಗಾಗಲೇ 30 ಜಿಲ್ಲೆಗಳಲ್ಲಿ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br>ಅಧಿಸೂಚನೆ ಹೊರಡಿಸಿದ 255 ನಗರ ಸ್ಥಳೀಯ ಸಂಸ್ಥೆಗಳಲ್ಲಿ 248 ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದ್ದು, 04 ನಗರ ಸ್ಥಳೀಯ ಸಂಸ್ಥೆಗಳಾದ ಕೆ.ಜಿ.ಎಫ್, ನೆಲಮಂಗಲ, ಚಿಕ್ಕೋಡಿ ಮತ್ತು ರಾಮದುರ್ಗದಲ್ಲಿ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಉಳಿದಂತೆ ಬೆಳಗಾವಿ ಜಿಲ್ಲೆಯ ಖಾನಾಪುರ ಪಟ್ಟಣ ಪಂಚಾಯಿತಿಯಲ್ಲಿ ವಿಶೇಷ |

ನೇಮಕಾತಿ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ರಿಟ್ ಅರ್ಜಿ ಸಂ:105299/2022ನ್ನು ದಾಖಲಿಸಿರುವ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:15.12.2022 ರಂದು ಮಧ್ಯಂತರ ಆದೇಶ ನೀಡಿರುತ್ತದೆ. ಆದ್ದರಿಂದ 3 ನಗರ ಸ್ಥಳೀಯ ಸಂಸ್ಥೆಗಳ (ಚಳ್ಳಕೆರೆ, ಮಾಲೂರು ಮತ್ತು ಖಾನಾಪುರ) ನೇಮಕಾತಿ ಸಂಬಂಧ ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುತ್ತದೆ.

ಇಲ್ಲಿಯವರೆಗೆ 2528 ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ಮೂಲಕ ಖಾಯಂ ಮಾಡಿಕೊಳ್ಳಲಾಗಿರುತ್ತದೆ.

ಅಲ್ಲದೇ ರಾಜ್ಯದ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿ ನೇರಪಾವತಿಯಡಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ನಿಯಮಗಳು–2022 ರ ರೀತ್ಯಾ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 176 ಜಿಎಲ್ 2022, ದಿನಾಂಕ: 23.11.2022 ರಲ್ಲಿ 5533 ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಲಾಗಿರುತ್ತದೆ.

ಆದರೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯದ ಅಧಿಸೂಚನೆ ದಿನಾಂಕ: 23.10.2022 ರಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಆಧ್ಯಾದೇಶ 2022 ನ್ನು ದಿನಾಂಕ: 01.11.2022 ರಿಂದ ಜಾರಿಗೊಳಿಸಲಾಗಿರುತ್ತದೆ. ಇದರನ್ವಯ ರಾಜ್ಯಾಧೀನ ಸೇವೆಗಳಲ್ಲಿನ ನೇರ ನೇಮಕಾತಿ ಅಥವಾ ಪದೋನ್ನತಿಯಲ್ಲಿ ಅನುಸೂಚಿತ ಜಾತಿಗಳಿಗೆ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಹೆಚ್ಚಿಸಲಾಗಿರುವ ಮೀಸಲಾತಿಯನ್ನು ಜಾರಿಗೊಳಿಸಲು ರೋಸ್ಟರ್ ಬಿಂದುಗಳನ್ನು ಗುರುತಿಸುವ ಪ್ರಕ್ರಿಯೆಯು ಚಾಲನೆಯಲ್ಲಿದ್ದು, ಈ ಪ್ರಕ್ರಿಯೆಯು ಅಂತಿಮಗೊಂಡು ಅಧಿಕೃತವಾಗಿ ಪ್ರಕಟವಾಗುವವರೆಗೆ ಎಲ್ಲಾ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಮತ್ತು ಮೀಸಲಾತಿ ಅನ್ವಯವಾಗುವ ವೃಂದಗಳಿಗೆ ನೀಡಲಾಗುವ ಮುಂಬಡ್ತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಆಯೋಜಿಸಬಾರದೆಂದು ಸೂಚಿಸಲಾಗಿರುವುದರಿಂದ ನೇಮಕಾತಿಗೆ ಕ್ರಮವಹಿಸಲಾಗಿರುವುದಿಲ್ಲ. ಮೀಸಲಾತಿ ನಿಯಮದ ಅಂತಿಮ ಆದೇಶವಾದ ನಂತರ ನೇಮಕಾತಿಗೆ ಕ್ರಮವಹಿಸಲಾಗುವುದು.

ಸಂಖ್ಯೆ: ನಅಇ 332 ಜಿಇಎಲ್ 2022(ಇ)

ಎನ್.ನಾಗರಾಜ್ (ಎಂ.ಟಿ.ಬಿ)

ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು